ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ
ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 22/2022**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು ಃ ಎ **1.** ಗೋವಿಂದರಾಜು
ತಂದೆ - ತಿಮ್ಮಾಬೋವಿ

ಎ **2.** ಹರೀಶ
ತಂದೆ - ತಿಮ್ಮಾಬೋವಿ

ಇಬ್ಬರ ವಾಸಃ ಕೆಬ್ಬೆಕೊಪ್ಪಲು ಗ್ರಾಮ
ಹುಣಸೂರು ತಾಲ್ಲೂಕು
ಮೈಸೂರು ಜಿಲ್ಲೆ.

## ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

1. ದಿನಾಂಕಃ 12.07.2021 ರಂದು ರಾತ್ರಿ 8.30 ಗಂಟೆ ಸಮಯದಲ್ಲಿ ಹುಣಸೂರು ತಾಲ್ಲೂಕು ಕೆಬ್ಬೆಕೊಪ್ಪಲು ಗ್ರಾಮದ ಸಾಕ್ಷಿ 3 ಅವರ ಮನೆಯ ಮುಂಭಾಗ ಸಾಕ್ಷಿ 1 ಮತ್ತು 2 ರವರು ಊಟ ತೆಗೆದುಕೊಂಡು ಬಂದಾಗ ಸಾಕ್ಷಿ 1 ರವರ ಎದುರು ಮನೆಯ ವಾಸಿಯಾದ 1 ನೇ ಆರೋಪಿಯಾದ ನೀವು ಸಾಕ್ಷಿ 3 ಅವರಿಗೆ ನಮ್ಮ ಮನೆಯ ಹತ್ತಿರ ಯಾಕೆ ರೀಸೆಸ್ ಮಾಡುತ್ತೀಯ ಎಂದು ಹೇಳಿ ಏಕಾಏಕಿ ಕೈಯಿಂದ

ಸಾಕ್ಷಿ 3 ಅವರ ಎಡ ಕಪಾಳಕ್ಕೆ ಹೊಡೆದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ಮತ್ತು 2 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, 2 ನೇ ಆರೋಪಿಯಾದ ನೀವು ಸಾಕ್ಷಿ 3 ಅವರನ್ನು ಹಿಡಿದುಕೊಂಡು ಅವರನ್ನು ಮುಂದೆ ಹೋಗದಂತೆ ಅವರಿಗೆ ಅಕ್ರಮ ತಡೆಯನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ಮತ್ತು 2 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, 2 ನೇ ಆರೋಪಿಯಾದ ನೀವು ಸಾಕ್ಷಿ 3 ಅವರಿಗೆ ಬೋಳಿಮಗನೆ, ಬಡ್ಡಿಮಗನೆ ನಿನಗೆ ಎಷ್ಟು ಬಾರಿ ಹೇಳಿದರೂ ಹೀಗೆ ಮಾಡುತ್ತೀಯಾ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

4. ನಾಲ್ಕನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ಮತ್ತು 2 ನೇ ಆರೋಪಿಗಳಾದ ನೀವುಗಳು ಅಪರಾಧ

ಎಸಗುವ ಸಮಾನ ಉದ್ದೇಶದಿಂದ, ಆ ಸಮಯದಲ್ಲಿ ಗಲಾಟೆ ಬಿಡಿಸಲು ಬಂದ ಸಾಕ್ಷಿ 2 ಅವರಿಗೆ 1 ನೇ ಆರೋಪಿಯಾದ ನೀವು ಮಾರಕಾಸ್ತ್ರವಾದ ರೀಪರ್ ಪಟ್ಟಿಯಿಂದ ಸಾಕ್ಷಿ 2 ಅವರ ಬಲದ ಮುಂಗೈಗೆ ಹೊಡೆದಿದ್ದು, 2 ನೇ ಆರೋಪಿಯಾದ ನೀವು ಮಾರಕಾಸ್ತ್ರವಾದ ಗೊದಮೊಟ್ಟೆಯಿಂದ ಸಾಕ್ಷಿ 2 ಅವರ ಮೈಕೈಗೆ ಹೊಡೆದು ತೀವ್ರ ಸ್ವರೂಪದ ಗಾಯಗಳನ್ನುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 326 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

5. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, 1 ಮತ್ತು 2 ನೇ ಆರೋಪಿಗಳಾದ ನೀವುಗಳು ಅಪರಾಧ ಎಸಗುವ ಸಮಾನ ಉದ್ದೇಶದಿಂದ, 2 ನೇ ಆರೋಪಿಯಾದ ನೀವು ಸಾಕ್ಷಿ 3 ಅವರಿಗೆ ನಿನ್ನನ್ನು ಕೊಲೆ ಮಾಡುತ್ತೇನೆಂದು ಕೊಲೆ ಬೆದರಿಕೆ ಹಾಕಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆಪಾದನೆಗಳು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆಪಾದನೆಗಳಿಗೆ ಆರೋಪಿಗಳಾದ ನೀವುಗಳು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(**ಪೂಜಾ ಬೆಳಕೇರಿ**)**
ದಿನಾಂಕಃ **14.03.2024** ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
ಪ್ರ**.**ದ**.**ನ್ಯಾ**.**ದಂಡಾಧಿಕಾರಿಗಳು**,** ಹುಣಸೂರು**.**

# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾ ಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 22/2022**

ಫಿರ್ಯಾದಿದಾರರು: ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ/ಗಳು : ಎ 2. ಹರೀಶ
ತಂದೆ - ತಿಮ್ಮಾಬೋವಿ

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆ: ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರ:

ಪ್ರಶ್ನೆ: ತಪ್ಪೊಪ್ಪಿಕೊಳ್ಳುವಿರೋ**,** ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರ:

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು**,** ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ**.**

**(**ಪೂಜಾ ಬೆಳಕೇರಿ**)**

ದಿನಾಂಕ: **14.03.2024**

ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ**.**ದಂ**.**ನ್ಯಾ**..** ದಂಡಾಧಿಕಾರಿಗಳು**,** ಹುಣಸೂರು**.**